ಕರ್ನಾಟಕ ಸರ್ಕಾರ

# ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ

(ಕರ್ನಾಟಕ ಸರ್ಕಾರದ ಅಂಗ ಸಂಸ್ಥೆ)

Government of Karnataka

# Karnataka Residential Educational Institutions Society

(An Organisation of Govt. of Karnataka)

ಕವಶಿಸಸ/ಆಡಳಿತ/ಸಿಬ್ಬಂದಿ/ಸಿಆರ್-/2021-22 ದಿನಾಂಕ: 27.06.2022

**ಅಧಿಕೃತ ಜ್ಞಾಪನ**

ವಿಷಯ: 2022-23ನೇ ಸಾಲಿನಲ್ಲಿ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳ ಸಾರ್ವತ್ರಿಕ ವರ್ಗಾವಣೆ ಮಾಡುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ : ಸಕಇ 308 ಎಂಡಿಎಸ್ 2022, ದಿ:05.05.2022
2. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 16 ಸೇನೌವ 2022 ದಿ: 30.04.2022
3. ಈ ಕಛೇರಿ ಅಧಿಕೃತ ಜ್ಞಾಪನ ಪತ್ರ ದಿನಾಂಕ: 10.06.2022
4. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 16 ಸೇನೌವ 2022 ದಿ: 15.06.2022

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ 2022-23 ನೇ ಸಾಲಿನ ಸಾರ್ವತ್ರಿಕ ವರ್ಗಾವಣಾ ಮಾರ್ಗಸೂಚಿಯನ್ನು ಉಲ್ಲೇಖ(1) ರ ಸರ್ಕಾರದ ಆದೇಶದೊಂದಿಗೆ ಹೊರಡಿಸಲಾಗಿರುತ್ತದೆ.

ಉಲ್ಲೇಖ(2)ರ ಸರ್ಕಾರದ ಆದೇಶದಲ್ಲಿ 2022-23 ನೇ ಸಾಲಿನಲ್ಲಿ ದಿನಾಂಕ:01.05.2022 ರಿಂದ 15.06.2022 ರೊಳಗೆ ಸಾರ್ವತ್ರಿಕ ವರ್ಗಾವಣೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಆದೇಶಿಸಲಾಗಿರುತ್ತದೆ. ಅದರಂತೆ ಉಲ್ಲೇಖ(1)ರ ಸರ್ಕಾರದ ಸಾರ್ವತ್ರಿಕ ವರ್ಗಾವಣಾ ಮಾರ್ಗಸೂಚಿಯನ್ವಯ ಸಂಘದ ಎಸ್.ಎಂ.ಎಸ್ ತಂತ್ರಾಂಶದಲ್ಲಿ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

ಉಲ್ಲೇಖ(2)ರ ಸರ್ಕಾರದ ಆದೇಶದಲ್ಲಿ ಸಾರ್ವತ್ರಿಕ ವರ್ಗಾವಣೆ ಪ್ರಕ್ರಿಯೆಗೆ ಶೇ.6 ರಷ್ಟು ನಿಗಧಿಪಡಿಸಿದ್ದು, ಅದರಂತೆ ದಿನಾಂಕ: 14.06.2022 ಮತ್ತು 15.06.2022 ರಂದು ವರ್ಗಾವಣೆ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಗೈರು ಹಾಜರಾಗಿರುವ ಸಿಬ್ಬಂದಿಗಳ ಬದಲಾಗಿ ಶೇ.6 ರಷ್ಟು ನಿಗಧಿಪಡಿಸಲಾದ ಪಟ್ಟಿಯಲ್ಲಿ ನಂತರದ ಜೇಷ್ಠತೆಯನ್ನು ಹೊಂದಿರುವ ಸಿಬ್ಬಂದಿಗಳಿಗೆ ದಿನಾಂಕ:23.06.2022 ರಂದು ಸ್ಥಳ ಆಯ್ಕೆ ಮಾಡಿಕೊಳ್ಳಲು ಎರಡನೇ ವರ್ಗಾವಣಾ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಆಯೋಜಿಸಲಾಗಿತ್ತು.

ಮೊದಲನೇ ಮತ್ತು ಎರಡನೇ ವರ್ಗಾವಣೆ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಆಯ್ಕೆಯಾದ ಸಿಬ್ಬಂದಿಗಳು ಆಯ್ಕೆ ಮಾಡಿಕೊಂಡ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗಳನ್ನು ಸ್ಥಳಾಂತರ **(Disturb)** ಮಾಡಿದ್ದು, ಸದರಿ ಸ್ಥಳಾಂತರ **(Disturb)** ಆಗಿರುವ ಸಿಬ್ಬಂದಿಗಳಿಗೆ ವಸತಿ ಶಾಲೆಗಳನ್ನು ಆಯ್ಕೆ ಮಾಡಿಕೊಳ್ಳಲು ದಿನಾಂಕ:30.06.2022 ರಂದು ದೇವರಾಜ ಅರಸು ಭವನ ವಸಂತನಗರ, ಬೆಂಗಳೂರು ಇಲ್ಲಿ ಈ ಕೆಳಕಂಡಂತೆ ಹಾಜರಾಗಿ ವರ್ಗಾವಣೆಗೆ ಸ್ಥಳ ಆಯ್ಕೆ ಮಾಡಿಕೊಳ್ಳುವಂತೆ ತಿಳಿಸಲಾಗಿದೆ.

| ಕ್ರ ಸಂ | ಪದನಾಮ/ಹುದ್ದೆ | ಒಟ್ಟು ಸ್ಥಳಾಂತರ (Distrub) ಗೊಂಡ ಸಿಬ್ಬಂದಿಗಳ ಸಂಖ್ಯೆ | ಸಮಯ |
|---|---|---|---|
| 1 | PRINCIPAL SCHOOL | 5 | ಬೆಳಿಗ್ಗೆ 10.00 ರಿಂದ ಸಂಜೆ 2.30 |
| 2 | KANNADA | 12 | |
| 3 | ENGLISH | 10 | |
| 4 | HINDI | 10 | |
| 5 | MATHS | 12 | |
| 6 | SCIENCE | 15 | |
| 7 | SOCIAL | 13 | |
| 8 | PHY EDN | 18 | |
| 9 | COMPUTER | 12 | |

| | | | |
|---|---|---|---|
| 10 | MUSIC | 2 | |
| 11 | FDA | 8 | |
| 12 | STAFF NURSE | 5 | |
| 13 | WARDEN | 2 | |
| | TOTAL | **124** | |

ಮೇಲ್ಕಂಡಂತೆ ವರ್ಗಾವಣೆ ಪಟ್ಟಿಯಲ್ಲಿರುವ ಸಿಬ್ಬಂದಿಗಳು ಈ ಕೆಳಕಂಡ ಷರತ್ತಿಗೊಳಪಟ್ಟು ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಹಾಜರಾಗಲು ಸೂಚಿಸಿದೆ.

1. ವೇಳಾಪಟ್ಟಿ ಅನುಸಾರ ನಿಗಧಿಪಡಿಸಿದ ಸಮಯ ಹಾಗೂ ಸ್ಥಳದಲ್ಲಿ ಒಂದು ಗಂಟೆ ಮುಂಚಿತವಾಗಿ ವರದಿ ಮಾಡಿಕೊಳ್ಳುವುದು.
2. ವರ್ಗಾವಣೆ ಕೌನ್ಸಿಲಿಂಗ್ ಪ್ರಕ್ರಿಯೆಗೆ ಹಾಜರಾಗುವ ಸಿಬ್ಬಂದಿಗಳಿಗೆ ಕೌನ್ಸಿಲಿಂಗ್ ದಿನಾಂಕದಂದು ಮಾತ್ರ ಒ.ಒ.ಡಿ ಎಂದು ಪರಿಗಣಿಸುವುದು.
3. ಸ್ಥಳಾಂತರ (**Disturb**) ಆಗಿರುವ ಸಿಬ್ಬಂದಿಗಳ ವರ್ಗಾವಣೆಯ ಪಟ್ಟಿಯನ್ನು ಸಿದ್ದಪಡಿಸುವಾಗ 2022-23 ನೇ ವರ್ಗಾವಣಾ ಮಾರ್ಗಸೂಚಿಯನ್ವಯ ಸೇವಾ ಜೇಷ್ಠತೆ/ಮಹಿಳೆ ಇತ್ಯಾದಿ ಆದ್ಯತೆಗಳನುಸಾರ ಪರಿಗಣಿಸಲಾಗುವುದು.
4. ಸ್ಥಳಾಂತರ (**Disturb**) ಆಗಿರುವ ಸಿಬ್ಬಂದಿಗಳು ಮಾತ್ರ ಕೌನ್ಸಿಲಿಂಗ್ ಸಮಯದಲ್ಲಿ ಭಾಗವಹಿಸಬೇಕು, ಬೇರೆ ಯಾವುದೇ ಸಿಬ್ಬಂದಿ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಅಲ್ಲದೇ ಸದರಿ ಸಿಬ್ಬಂದಿಗಳ ಕೌನ್ಸಿಲಿಂಗ್ ಕೊಠಡಿ ಹಾಗೂ ಪ್ರಾಂಗಣದಲ್ಲಿ ಪೋಷಕರನ್ನಾಗಲೀ ಅಥವಾ ಇತರರನ್ನಾಗಲೀ ಕರೆತರತಕ್ಕದ್ದಲ್ಲ.
5. ಕೌನ್ಸಿಲಿಂಗ್ ಪ್ರಕ್ರಿಯೆಗೆ ನಿಗದಿತ ಸ್ಥಳ ಹಾಗೂ ಸಮಯದಲ್ಲಿ ಕಡ್ಡಾಯವಾಗಿ ಹಾಜರಾಗತಕ್ಕದ್ದು. ಗೈರು ಹಾಜರಾದಲ್ಲಿ ಅಂತಹ ಸಿಬ್ಬಂದಿಗಳಿಗೆ ಮರು ಅವಕಾಶ ನೀಡುವುದಿಲ್ಲ.
6. ಕೌನ್ಸಿಲಿಂಗ್ ಪ್ರಕ್ರಿಯೆಗೆ ಸಿಬ್ಬಂದಿಯ ಪರವಾಗಿ ಯಾವುದೇ ಕಾರಣಕ್ಕೂ ಬೇರೊಬ್ಬ ವ್ಯಕ್ತಿ ಹಾಜರಾಗಲು ಅವಕಾಶವಿರುವುದಿಲ್ಲ.
7. ಸ್ಥಳಾಂತರ (**Disturb**) ಆಗಿರುವ ಸಿಬ್ಬಂದಿಗಳು ಖಾಲಿ ಹುದ್ದೆ ಇರುವ ವಸತಿ ಶಾಲೆಗಳನ್ನು ಆಯ್ಕೆ ಮಾಡಿಕೊಳ್ಳಲು ಮಾತ್ರ ಅವಕಾಶವಿದ್ದು, ಬೇರೊಬ್ಬರನ್ನು **Disturb** ಮಾಡಲು ಅವಕಾಶ ನೀಡಲಾಗುವುದಿಲ್ಲ.
8. ಕೌನ್ಸಿಲಿಂಗ್ ಸಂದರ್ಭದಲ್ಲಿ ಅಭ್ಯರ್ಥಿಗಳು ಹಾಜರಾತಿ ವಹಿಯಲ್ಲಿ ಹಾಗೂ ಸ್ಥಳವನ್ನು ಆಯ್ಕೆ ಮಾಡಿಕೊಂಡ ನಂತರ ಸ್ಥಳ ನಿಯುಕ್ತಿ ವಹಿಯಲ್ಲಿ ತಾವು ಆಯ್ಕೆ ಮಾಡಿಕೊಂಡಿರುವ ಸ್ಥಳದ ಬಗ್ಗೆ ಖಚಿತ ಪಡಿಸಿಕೊಂಡು ಸ್ವೀಕೃತಿ ಪಡೆದು ಸಹಿ ಮಾಡುವುದು.
9. ಸ್ಥಳ ನಿಯುಕ್ತಿ ಕೌನ್ಸಿಲಿಂಗ್ ಸಂದರ್ಭದಲ್ಲಿ ಒಮ್ಮೆ ಆಯ್ಕೆ ಮಾಡಿಕೊಂಡ ಸ್ಥಳವನ್ನು ಯಾವುದೇ ಕಾರಣಕ್ಕೂ ಬದಲಾಯಿಸಲು ಅವಕಾಶವಿರುವುದಿಲ್ಲ. ಈ ಸಂಬಂಧ ಯಾವುದೇ ರೀತಿಯ ಒತ್ತಡ ತಂದಲ್ಲಿ ಅವರ ವಿರುದ್ದ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು.
10. ಕೌನ್ಸಿಲಿಂಗ್ ಕಾರ್ಯಕ್ಕೆ ಹಾಜರಾಗುವ ಸಿಬ್ಬಂದಿಗಳಿಗೆ ಯಾವುದೇ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಗಳನ್ನು ಪಾವತಿಸುವುದಿಲ್ಲ.
11. ಆಯಾ ವಸತಿ ಶಾಲೆಗಳ ಪ್ರಾಂಶುಪಾಲರುಗಳಿಂದ ಸೇವಾ ದೃಢೀಕರಣ ಪ್ರಮಾಣ ಪತ್ರವನ್ನು ಹಾಜರುಪಡಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು